# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ

## ಕೆಂಪೇಗೌಡ ವಾರ್ಡ್ ನಂ-01ರಲ್ಲಿ ದಿನಾಂಕ: 04-12-2021. ರಂದು ನಡೆದ ಸಮಿತಿ ಸಭಾ ನಡವಳಿ.

ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ.

1. ಶ್ರೀ.ರಜನಿಕಾಂತ್ ಮಳ್ಳಿ, ನೋಡಲ್ ಅಧಿಕಾರಿಗಳು.
2. ಶ್ರೀ.ಮಲ್ಲಿನಾಥ ಮಲ್ಕಾಪುರ, ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿ.
3. ಶ್ರೀ.ಬಾಬರೆಡ್ಡಿ, ಸಹಾಯಕ ಅಭಿಯಂತರರು (ವಿದ್ಯುತ್ ವಿಭಾಗ),
4. ಶಶಿಕುಮಾರ್ ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ
5. ಶ್ರೀ.ವಿವೇಕ್, ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ-01.

ವಾರ್ಡ್ ಸಮಿತಿಯ ಪ್ರಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ನೋಡೆಲ್ ಅಧಿಕಾರಿಗಳು ಹಾಗೂ ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳನ್ನು ಕೋರಲಾಯಿತು.

1. ಕೆಂಪೇಗೌಡ ವಾರ್ಡ್ ನಂ -01ರ ವ್ಯಾಪ್ತಿಯಲ್ಲಿ ಕೋವಿಡ್ - 19ರ ಸಂಬಂಧ ಮೂರನೇ ಅಲೆ ಬಗ್ಗೆ ಚರ್ಚಿಸಿ ವಾರ್ಡ್‌ಗಳ ವ್ಯಾಪ್ತಿಯಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ವ್ಯಾಕ್ಸಿನೇಷನ್ ಹಾಕಿಸಿಕೊಳ್ಳುವಂತೆ ಸಭೆಯಲ್ಲಿ ನೋಡೆಲ್ ಅಧಿಕಾರಿಗಳು ಸೂಚಿಸಿದರು.

2. ಕೆಂಪೇಗೌಡ ವಾರ್ಡ್ ನಂ -01ರ ವ್ಯಾಪ್ತಿಯಲ್ಲಿರುವ ಯಲಹಂಕ ಓಲ್ಡ್ ಟೌನ್ ಕೋಗಿಲು ವೃತ್ತದಲ್ಲಿರುವ ಕೇಂದ್ರಿಯ ವಿಹಾರ ಅಪಾರ್ಟ್‌ಮೆಂಟ್ ಪರಿಮಿತಿಯಲ್ಲಿ ಹವಮಾನ ವೈಪರಿತ್ಯದಿಂದಾಗಿ ಹೆಚ್ಚಾಗಿ ಸುರಿದ ಭಾರಿ ಮಳೆಯಿಂದಾಗಿ ಸೆಲ್ಲರ್‌ನಲ್ಲಿ ಮಳೆ ನೀರು ಶೇಖರಣೆಯಾಗಿದ್ದು, ಸದರಿ ಜಾಗದಲ್ಲಿ ಶೇಖರಣೆಯಾಗಿದ್ದ ರಾಜಕಾಲುವೆಯಲ್ಲಿ ತುಂಬಿರುವ ಹೂಳನ್ನು ತೆಗೆಯಲಾಗಿರುತ್ತದೆ ಎಂದು ವಾರ್ಡ್‌ನ ಸಹಾಯಕ ಅಭಿಯಂತರರು ಸಭೆಯಲ್ಲಿ ನೊಡೆಲ್ ಅಧಿಕಾರಿಗಳಿಗೆ ತಿಳಿಸಿದರು.

3. ಕೆಂಪೇಗೌಢ ವಾರ್ಡ್ ನಂ -01ರ ವ್ಯಾಪ್ತಿಯಲ್ಲಿ ಶಿವನಹಳ್ಳಿ 2ನೇ ಹಂತದಲ್ಲಿರುವ ರಾಜಕಾಲುವೆಯಲ್ಲಿ ತುಂಬಿರುವ ಹೂಳನ್ನು ಹಾಗೂ ಯಲಹಂಕ ಓಲ್ಡ್ ಟೌನ್‌ನಲ್ಲಿರುವ ಡೌನ್ ಬಜಾರ್ ರಸ್ತೆಯಲ್ಲಿರುವ ಎರಡು ಬದಿ ಚರಂಡಿಗಳಲ್ಲಿ ತುಂಬಿರುವ ಹೂಳನ್ನು ತೆಗೆದು ಮಳೆ ನೀರು ಸರಾಗವಾಗಿ ಹರಿಯುವಂತೆ ಮಾಡಲಾಯಿತು. ಎಂದು ವಾರ್ಡ್‌ನ ಸಹಾಯಕ ಅಭಿಯಂತರರು ಸಭೆಯಲ್ಲಿ ನೊಡೆಲ್ ಅಧಿಕಾರಿಗಳಿಗೆ ತಿಳಿಸಿದರು.

4. ವಾರ್ಡ್‌ಗಳಲ್ಲಿ ಬಿದ್ದ ಭಾರಿ ಮಳೆಯಿಂಧಾಗಿ ವಾರ್ಡ್‌ಗಳ ವ್ಯಾಪ್ತಿಯಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚಲು ಹಾಗೂ ಶೋಲ್ಡರ್ ಡ್ರೈನ್‌ಗಳನ್ನು ತೆರವುಗೊಳಿಸಿ ಮಳೆ ನೀರು ಸರಾಗವಾಗಿ ಹರಿಯುವಂತೆ ಮಾಡಲು ಸಂಬಂದಿಸಿದ ವಾರ್ಡ್‌ನ ಅಭಿಯಂತರರಿಗೆ ನೊಡಲ್ ಅಧಿಕಾರಿಗಳು ಸೂಚಿಸಿದರು.

5. ವಾರ್ಡ್‌ನ ವ್ಯಾಪ್ತಿಯಲ್ಲಿರುವ ಮಾರುತಿನಗರ 7ನೇ ಅಡ್ಡರಸ್ತೆಯಲ್ಲಿ ಬೀದಿ ದೀಪ ಉರಿಯುತ್ತಿರುವುದಿಲ್ಲ ಎಂದು ಸಾರ್ವಜನಿಕರು ದೂರು ನೀಡಿದ್ದು, ಸದರಿ ದೂರಿನನ್ವಯು ಸ್ಥಳ ಪರಿಶೀಲನೆ ಮಾಡಿ ಬೀದಿ ದೀಪ ರಿಪೇರಿ ಮಾಡಿಸಿಕೊಡಲು ನೊಡೆಲ್ ಅಧಿಕಾರಿಗಳು ಸೂಚಿಸಿದರು.

6. ಕೆಂಪೇಗೌಡ ವಾರ್ಡ್ ನಂ -01ರಲ್ಲಿ ಹಿರಿಯ ಆರೋಗ್ಯ ಪರಿವೀಕ್ಷಕರು ಇಲ್ಲದೇ ಇರುವುದರಿಂದ ದಿನನಿತ್ಯದ ಘನತ್ಯಾಜ್ಯ ನಿರ್ವಹಣೆ ಕೆಲಸಗಳನ್ನು ನಿರ್ವಹಿಸುವುದು ಕಷ್ಟಕರವಾಗಿದ್ದು, ಈಗಾಗಲೇ ಹಲವಾರು ಭಾರಿ ದೂರನ್ನು ನೀಡಿದ್ದರೂ ಸಹ ಈ ವಾರ್ಡ್‌ನಲ್ಲಿ ಕೆಲಸಗಳನ್ನು ನಿರ್ವಹಿಸಲು ಹಿರಿಯ ಆರೋಗ್ಯ ಪರಿವೀಕ್ಷಕರು ಬಂದಿರುವುದಿಲ್ಲ ಎಂದು ಸಭೆಯಲ್ಲಿ ಶ್ರೀ.ಅ.ಬ ಶಿವಕುಮಾರ್ ರವರು ಅಕ್ಷೇಪಣೆ ವ್ಯಕ್ತಪಡಿಸಿದರು.
7. ವಾರ್ಡ್‌ಗಳ ವ್ಯಾಪ್ತಿಯಲ್ಲಿ ಒಣ ಕಸ ಸಂಗ್ರಹಣೆ ಮಾಡಲು ಮೂರು ಆಟೋ ಟಿಪ್ಪರ್‌ಗಳನ್ನು ಒದಗಿಸಬೇಕಾಗಿದ್ದು, ಇದರಲ್ಲಿ ಒಂದು ಆಟೋ ಬರುತ್ತಿಲ್ಲವೆಂದು ಸಭೆಯಲ್ಲಿ ಸಾರ್ವಜನಿಕರು ಅಕ್ಷೇಪಣೆ ವ್ಯಕ್ತಪಡಿಸಿದರು. ಸಂಬಂದಿಸಿದ ಏಜೆನ್ಸಿಯವರನ್ನು ವಿಚಾರಿಸಿದಾಗ ಬಿಲ್ ಪಾವತಿಸದ ಕಾರಣದಿಂದಾಗಿ ಆಟೊ ಟಿಪ್ಪರ್‌ಗಳನ್ನು ಕಳುಹಿಸುತ್ತಿಲ್ಲವೆಂದು ಕಿರಿಯ ಆರೋಗ್ಯ ಪರಿವೀಕ್ಷಕರು ನೊಡೆಲ್ ಅಧಿಕಾರಿಗಳಿಗೆ ತ್ರಿಳಿಸಿದರು.
8. ವಾರ್ಡ್‌ಗಳ ವ್ಯಾಪ್ತಿಯಲ್ಲಿ ಘನತ್ಯಾಜ್ಯ ವಸ್ತುಗಳನ್ನು ಸಮರ್ಪಕವಾಗಿ ಸಂಗ್ರಹಣೆ ಹಾಗೂ ನಿರ್ವಹಣೆ ಮಾಡುವಂತೆ ಸಂಬಂಧಿಸಿದ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ನೊಡೆಲ್ ಅಧಿಕಾರಿಗಳು ಸಭೆಯಲ್ಲಿ ಸೂಚಿಸಿದರು.
9. ಸುರಬಿ ಬಡಾವಣೆ ಶಿವನಹಳ್ಳಿ ಮತ್ತು ಜಕ್ಕೂರು ಮುಖ್ಯರಸ್ತೆಯಲ್ಲಿ ಸಾರ್ವಜನಿಕರು ಸ್ಯಾನಿಟರಿ ಒಳಚರಂಡಿ ನೀರನ್ನು ರಸ್ತೆಯ ಬದಿ ಇರುವ ತೆರೆದ ಚರಂಡಿಗೆ ಬಿಡುತ್ತಿರುವುದಾಗಿ ಸಭೆಯಲ್ಲಿ ಸಾರ್ವಜನಿಕರು ನೊಡೆಲ್ ಅಧಿಕಾರಿಗಳಿಗೆ ದೂರನ್ನು ಸಲ್ಲಿಸಿದರು.

ಮೇಲ್ಕಂಡ ಎಲ್ಲಾ ಅಂಶಗಳಿಗೂ ಕ್ರಮ ಕೈಗೊಳ್ಳಬೇಕಾದ ಎಲ್ಲಾ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ಮುಂದಿನ ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಎಲ್ಲಾ ಅಧಿಕಾರಿಗಳು ಹಾಜರಾಗಲು ಮಾನ್ಯ ನೊಡೆಲ್ ಅಧಿಕಾರಿಗಳು ಸಭೆಯಲ್ಲಿ ಸೂಚಿಸಿದರು. ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾದನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

ಕಾರ್ಯದರ್ಶಿಗಳು/ ಸಹಾಯಕ ಅಭಿಯಂತರರು
ವಾರ್ಡ್ ಕಮಿಟಿ, ವಾರ್ಡ್ ನಂ. 01(ಕೆಂಪೇಗೌಡ)

ವಾರ್ಡ್‌ನ ನೊಡೆಲ್ ಅಧಿಕಾರಿಗಳು
ವಾರ್ಡ್ ಕಮಿಟಿ, ವಾರ್ಡ್ ನಂ. 01(ಕೆಂಪೇಗೌಢ)

ಪ್ರತಿಯನ್ನು:

ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರುಗಳ ಮಾಹಿತಿಗಾಗಿ.

1. ಶ್ರೀ.ರಜನಿಕಾಂತ್ ಮಳ್ಳಿ, ನೊಡಲ್ ಅಧಿಕಾರಿಗಳು.

## ಅಧಿಕಾರಿಗಳ ಮಾಹಿತಿಗಾಗಿ.

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಮಾಹಿತಿಗಾಗಿ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಮಾಹಿತಿಗಾಗಿ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರ ಮಾಹಿತಿಗಾಗಿ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರ ಸೂಕ್ತ ಕ್ರಮಕ್ಕಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ ವಿಭಾಗ ಬಿ.ಬಿ.ಎಂ.ಪಿ ರವರ ಸೂಕ್ತ ಕ್ರಮಕ್ಕಾಗಿ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, (ವಿದ್ಯುತ್) ಯಲಹಂಕರವರ ಸೂಕ್ತ ಕ್ರಮಕ್ಕಾಗಿ.